ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

**ಸಂಖ್ಯೆ : ಸಂಖ್ಯೆ : ಸಿ5(2)ಪವ್ಯ.ಬ.12/2019-20** ದಿನಾಂಕ:02-11-2019

***ಅಧಿಸೂಚನೆ***

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ)ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 09-10-2019 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ಈ ಕಛೇರಿಯ ಅಧಿಸೂಚನೆಯ ಸಮ ಸಂಖ್ಯೆ:16-10-2019.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು (ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 09-10-2019 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 64 ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಉಲ್ಲೇಖ[4] ರಲ್ಲಿ ಆದೇಶಿಸಲಾಗಿದೆ. ಈ ಪೈಕಿ 12 ನೌಕರರು ಬಡ್ತಿಯನ್ನು ಬಿಟ್ಟುಕೊಡಲು ಲಿಖಿತ ಒಪ್ಪಿಗೆ ಪತ್ರ ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹತೆ ಹೊಂದಿರುವ ಮುಂದಿನ ನೌಕರರುಗಳಿಗೆ ಬಡ್ತಿ ನೀಡಲು ತೀರ್ಮಾನಿಸಲಾಗಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಅವರು ಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ. ಈ ಕೆಳಕಂಡ ಅಧಿಕಾರಿಗಳಿಗೆ ನಂತರ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 18 ಸೇನೌವ 2014 ದಿನಾಂಕ: 06-02-2014 ರ ಅದೇಶದಂತೆ

ಅಂಗವಿಕಲ ನೌಕರರಿಗೆ ಆದ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಈ ಕೆಳಕಂಡ ನೌಕರರು ಅಂಥ ಬಡ್ತಿಯನ್ನು ಹೊಂದಲು ಇಚ್ಛಿಸದಿದ್ದರೆ, ದಿನಾಂಕ: 05-11-2019ರೊಳಗೆ [ಸದರಿ ಆದೇಶದ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್ www.schooleducation.kar.in ನಲ್ಲಿ ಪ್ರಕಟಿಸಲಾಗಿದೆ.] ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವುದು. ದಿನಾಂಕ:05-11-2019 ರ ನಂತರ ಯಾವುದೇ ಕೋರಿಕೆಯನ್ನು ಪರಿಗಣಿಸುವುದಿಲ್ಲ.

| ಕ್ರ.ಸಂ. | ಜೇಷ್ಠತಾ ಸಂಖ್ಯೆ: | ಬಡ್ತಿ ಹೊಂದಿದ ಅಧೀಕ್ಷಕರುಗಳ ಹೆಸರು ಮತ್ತು ಕಛೇರಿ ವಿಳಾಸ |
|---|---|---|
| 01 | 372 | ಎಂ.ಕೆ. ಸ್ವಾಮಿ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರ ಜಿಲ್ಲೆ |
| 02 | 373 | ಕೆ. ಸುಮತಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ |
| 03 | 374 | ಜಿ.ಎನ್. ರಾಘವೇಂದ್ರ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ |
| 04 | 375 | ಪ್ರಹ್ಲಾದ ವೆಂಕಟೇಶ್ ಪಾಟೀಲ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಭದ್ರಾವತಿ, ಶಿವಮೊಗ್ಗ ಜಿಲ್ಲೆ |
| 05 | 376 | ಬಿ.ಎ. ರಮೇಶ್ ಬಾಬು, ಅಧೀಕ್ಷಕರು, ಡಯಟ್, ಶಿವಮೊಗ್ಗ |
| 06 | 377 | ಬಿ. ವಿನಯ್ ಕುಮಾರ್ ಶೆಟ್ಟಿ, ಅಧೀಕ್ಷಕರು, ಡಯಟ್, ದಕ್ಷಿಣ ಕನ್ನಡ, ಮಂಗಳೂರು |
| 07 | 378 | ಲೆಡ್ವಿನ್ ಫರ್ನಾಂಡಿಸ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮೂಡಬಿದ್ರೆ, ದಕ್ಷಿಣ ಕನ್ನಡ ಜಿಲ್ಲೆ |
| 08 | 382 | ಎ.ಎಸ್. ಮೋಹನ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ನಗರ ಜಿಲ್ಲೆ |
| 09 | 386 | ಈ. ಶಿವಶಂಕರ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತಾಲ್ಲೂಕು ವಲಯ, ಮೈಸೂರು |
| 10 | 388 | ಬಿ. ಬಸವರಾಜಪ್ಪ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಿಕಾರಿಪುರ, ಶಿವಮೊಗ್ಗ |
| 11 | 390 | ಎಂ. ಶಿವಲಿಂಗಸ್ವಾಮಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹನೂರು ತಾಲ್ಲೂಕು, ಚಾಮರಾಜನಗರ ಜಿಲ್ಲೆ |
| 12 | 391 | ಕೆ.ಎನ್. ಬಸವರಾಜ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಿಕ್ಕಬಳ್ಳಾಪುರ |
| 13 | 394 | ಬಿ. ನರೇಂದ್ರ ಕುಮಾರ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |

| | | |
|---|---|---|
| 14 | 395 | ಎನ್. ವಿನಯ್‌ಕುಮಾರ್, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,ಮಂಡ್ಯ ಜಿಲ್ಲೆ, ಮಂಡ್ಯ |
| 15 | 399 | ಸಿ. ಬಸವರಾಜು, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು ಜಿಲ್ಲೆ |
| 16 | 400 | ಎಸ್.ವಿ. ಪ್ರಸನ್ನ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ |
| 17 | 401 | ಹೆಚ್.ಆರ್. ಶ್ರೀನಿಧಿ ಕುಮಾರ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |
| 18 | 402 | ಯು.ವಿ. ಕಿಶೋರ್ ಕುಮಾರ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬೆಳ್ತಂಗಡಿ ತಾ:: ದಕ್ಷಿಣ ಕನ್ನಡ ಜಿಲ್ಲೆ |
| 19 | 430 | ಎಲ್. ನಿಂಗಾನಾಯ್ಕ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು |

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

[ಅರುಳ್ ಕುಮಾರ್]

ಜಂಟಿ ನಿರ್ದೇಶಕರು[ಆಡಳಿತ]

2/11/4

ಇವರಿಗೆ:

1) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
2) ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
4) ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
5) ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
6) ವಿಭಾಗೀಯ ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
7) ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.
8) ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
9) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
10) ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
11) ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
12) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
13) ಸಂಬಂಧಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
14) ಈ ಅಧಿಸೂಚನೆಯನ್ನು ಇಲಾಖಾ ವೆಬ್ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
15) ಸಂಬಂಧಿಸಿದ ಅಧೀಕ್ಷಕರುಗಳಿಗೆ. 16.ಕಛೇರಿ ಪ್ರತಿ.